# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1032(1246)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಸೂಕ್ಷ್ಮ ವಲಯ ಘೋಷಣೆ ಬಗ್ಗೆ

(ಅ) ಕೇಂದ್ರ ಸರ್ಕಾರದ ಅರಣ್ಯ, ಪರಿಸರ, ಜೀವಿಶಾಸ್ತ್ರ ಸಚಿವಾಲಯವು ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕಾವೇರಿ ವನ್ಯ ಜೀವಿಗಳ ಪರಿಸರ ಸೂಕ್ಷ್ಮ ವಲಯ/ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಪರಿಸರ ಸೂಕ್ಷ್ಮ ವಲಯ/ ಶ್ರೀರಾಮ ದೇವರಬೆಟ್ಟ ರಣಹದ್ದುಗಳ ಪರಿಸರ ಸೂಕ್ಷ್ಮ ವಲಯ ಎಂದು ಘೋಷಿಸಿ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅಧಿಸೂಚನೆಯಂತೆ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುವ ಗ್ರಾಮಗಳು/ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಿಂದ 01 ಕಿಲೋಮೀಟರ್ ವ್ಯಾಪ್ತಿಯೊಳಗೆ ಬರುವ ಗ್ರಾಮಗಳಿಗೆ ಭೌತಿಕವಾಗಿ ಗಡಿ ಗುರ್ತಿಸಲಾಗಿದೆಯೇ;

(ಇ) ಗುರುತಿಸಲಾಗಿದ್ದರೆ, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಾರ್ವಜನಿಕರಿಗೆ ಅವರ ಜಮೀನು ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುತ್ತವೆಯೇ ಅಥವಾ ಇಲ್ಲವೇ ಎಂಬ ಬಗೆ ನಿಖರವಾದ ಮಾಹಿತಿ ನೀಡುವಲ್ಲಿ ವಿಳಂಭ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪರಿಸರ ಸೂಕ್ಷ್ಮವಲಯ ವ್ಯಾಪ್ತಿಯೊಳಗೆ ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲು ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ನಿರ್ವಹಣಾ ಸಮಿತಿ ರಚಿಸಿದ್ದು, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದು ಅದರಂತೆ ಈವರೆವಿಗೆ ಎಷ್ಟು ಸಮಿತಿ ಸಭೆ ನಡೆಸಲಾಗಿದೆ; ಎಷ್ಟು ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲಾಗಿದೆ?